# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 852 |
| ಸದಸ್ಯರ ಹೆಸರು | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 23.07.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯಲ್ಲಿ ಮರಳು ಗಣಿಗಾರಿಕೆ ನಡೆಸಲು ಎಷ್ಟು ಗುತ್ತಿಗೆಗಳನ್ನು ನೀಡಲಾಗಿದೆ; ಯಾವ ಯಾವ ನದಿ ಪಾತ್ರಗಳಲ್ಲಿ ಮರಳು ಗಣಿಗಾರಿಕೆಗೆ ಅನುಮತಿ ನೀಡಿದೆ; (ಗುತ್ತಿಗೆದಾರರ ಹೆಸರು ಮತ್ತು ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು). | ಉತ್ತರ ಕನ್ನಡ ಜಿಲ್ಲೆಯ ಕರಾವಳಿ ನಿಯಂತ್ರಣ ವಲಯ ಹೊರತುಪಡಿಸಿದ (Non CRZ) ನದಿ ಪಾತ್ರಗಳ ವ್ಯಾಪ್ತಿಯು ಪಶ್ಚಿಮ ಘಟ್ಟ, ಪರಿಸರ ಸೂಕ್ಷ್ಮ ವಲಯ ಮತ್ತು ಕಾಳಿ ಹುಲಿ ಸಂರಕ್ಷಣಾ ಪ್ರದೇಶದ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಆದುದರಿಂದ, ಉತ್ತರ ಕನ್ನಡ ಜಿಲ್ಲಾ ವ್ಯಾಪ್ತಿಯ ನದಿ ಪಾತ್ರಗಳಲ್ಲಿ ಮರಳು ಗಣಿಗಾರಿಕೆ ಸಂಬಂಧ ಗುತ್ತಿಗೆ ಮಂಜೂರಾತಿಗಾಗಿ ಯಾವುದೇ ಮರಳು ಬ್ಲಾಕ್ ಗಳನ್ನು ಗುರುತಿಸಿರುವುದಿಲ್ಲ. |
| ಆ) | ಉತ್ತರ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಸಿದವರ ಮೇಲೆ ಎಷ್ಟು ದೂರುಗಳನ್ನು ಇಲಾಖೆ ವತಿಯಿಂದ ದಾಖಲಿಸಲಾಗಿದೆ? | ಉತ್ತರ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ 2021-22 ನೇ ಸಾಲಿನಿಂದ 2023-24ನೇ ಸಾಲಿನವರೆಗೆ ಅನಧಿಕೃತ ಮರಳು ಗಣಿಗಾರಿಕೆಯಡಿ 09 ಪ್ರಕರಣಗಳನ್ನು ಹಾಗೂ ಅನಧಿಕೃತ ಮರಳು ಸಾಗಾಣಿಕೆಯಡಿ 22 ಪ್ರಕರಣಗಳನ್ನು ಸಂಬಂಧಪಟ್ಟ ನ್ಯಾಯಾಲಯಗಳಲ್ಲಿ ದಾಖಲಿಸಲಾಗಿರುತ್ತದೆ. |

ಸಂಖ್ಯೆ ಸಿಐ-ಎಂಎಂಎನ್/172/2024

S. S. Mallikarjun

**(ಎಸ್.ಎಸ್. ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.